ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಮಂಗಳವಾರ, ದಿನಾಂಕ : 24 ನೇ ಮಾರ್ಚ್, 2020

ರಾಜ್ಯದಲ್ಲಿ ನಗರಸಭೆ/ಪುರಸಭೆ /ಪಟ್ಟಣ ಪಂಚಾಯಿತಿಗಳ ಅಧ್ಯಕ್ಷರು ಹಾಗೂ ಉಪಾಧ್ಯಕ್ಷರ ಹುದ್ದೆಗಳಿಗೆ ಮೀಸಲಾತಿ ಪ್ರಕಟಿಸುವ ಬಗ್ಗೆ

ಶ್ರೀ ಹೆಚ್.ಎಂ. ರೇವಣ್ಣ(ವಿಧಾನಸಭೆಯಿಂದ ಚುನಾಯಿತರಾದವರು):-

1545 (1812) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ನಗರಸಭೆ/ಪುರಸಭೆ/ಪಟ್ಟಣ ಪಂಚಾಯತಿಗಳಿಗೆ ಈಗಾಗಲೇ ಚುನಾವಣೆ ನಡೆದು ಸುಮಾರು 4 ತಿಂಗಳು ಕಳೆದಿದ್ದರೂ ಸಹ ಅಧ್ಯಕ್ಷರು ಹಾಗೂ ಉಪಾಧ್ಯಕ್ಷರುಗಳ ಹುದ್ದೆಗಳಿಗೆ ಮೀಸಲಾತಿ ಪ್ರಕಟಿಸದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಪ್ರಕಟಿಸದೇ ಇರುವುದಕ್ಕೆ ಕಾರಣಗಳೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಮಿಸಲಾತಿ ಪ್ರಕಟಿಸದೇ ಇರುವುದರಿಂದ ನಗರಸಭೆ/ಪುರಸಭೆ /ಪಟ್ಟಣ ಪಂಚಾಯತಿಗಳಲ್ಲಿ ಚುನಾಯಿತರಾದ ಜನಪ್ರತಿನಿಧಿಗಳ ಹಕ್ಕನ್ನು ಮೊಟುಕುಗೊಳಿಸಿದಂತಾಗುವುದಿಲ್ಲವೇ;

(ಇ) ಹಾಗಿದ್ದಲ್ಲಿ, ಅಧ್ಯಕ್ಷರು ಹಾಗೂ ಉಪಾಧಕ್ಷರುಗಳ ಹುದ್ದೆಗಳಿಗೆ ಮೀಸಲಾತಿಯನ್ನು ಎಷ್ಟು ದಿನಗಳಲ್ಲಿ ಪ್ರಕಟಿಸಲಾಗುವುದು?